ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೊಂದನೆಯ ಅಧಿವೇಶನ
ಮಂಗಳವಾರ, ದಿನಾಂಕ: 29ನೇ ಸೆಪ್ಟಂಬರ್, 2020

ಕೊಬ್ಬರಿ ಧಾರಣೆಯು ಇಳಿಮುಖವಾಗುತ್ತಿರುವ ಕುರಿತು

ಶ್ರೀ ಎಂ. ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :-

916(1026) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಡಿಸೆಂಬರ್-2019 ರಿಂದ ಕೊಬ್ಬರಿ ಧಾರಣೆಯು ಇಳಿಮುಖವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕಾರಣಗಳೇನು ; (ವಿವರ ನೀಡುವುದು)

(ಆ) ಕೊಬ್ಬರಿ ಧಾರಣೆಯು ಇಳಿಮುಖವಾಗುತ್ತಿರುವುದರಿಂದ ತೆಂಗು ಬೆಳೆಗಾರರಿಗೆ ಆಗುತ್ತಿರುವ ನಷ್ಟವನ್ನು ಸರಿದೂಗಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು; ತೆಂಗು ಬೆಳೆಗಾರರಿಗೆ ಸರ್ಕಾರವು ಪರಿಹಾರ ಘೋಷಿಸಿದೆಯೇ; ಘೋಷಿಸಿದ್ದಲ್ಲಿ, ಕ್ವಿಂಟಾಲ್‌ಗೆ ಎಷ್ಟು ಪರಿಹಾರ ಘೋಷಿಸಿದೆ; (ಸಂಪೂರ್ಣ ವಿವರ ನೀಡುವುದು)

(ಇ) ತೆಂಗು ಬೆಳೆಗಾರರಿಗೆ ವಿಶೇಷ ಪ್ಯಾಕೇಜ್ ಅಥವಾ ಬೆಂಬಲ ಬೆಲೆ ಘೋಷಿಸಲು ಮತ್ತು ನಾಫೆಡ್ ಮೂಲಕ ಕೊಬ್ಬರಿ ಖರೀದಿ ಕೇಂದ್ರಗಳನ್ನು ತೆರೆಯುವ ಬಗ್ಗೆ ಸರ್ಕಾರದ ನಿಲುವೇನು ?